ಇ) ಹೌದು,

ಈ) 188.

ಉ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಲಾಭದಾಯಕವಾಗಿದೆ.

ಊ) ಪ್ರಸಕ್ತ ವರ್ಷದಲ್ಲಿ ರೂ. 193.25 ಲಕ್ಷಗಳು (ನವೆಂಬರ್ 2004ರವರೆಗೆ),

ಋ) 42.

2331(2578) ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ (ಕಿತ್ತೂರು):- ಮಾನ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗ್ರಾಮೀಣ ಪ್ರದೇಶದಲ್ಲಿ ಮೀನುಗಾರಿಕೆಯನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಆ) ಬೆಳಗಾವಿ ಜಿಲ್ಲೆಯಲ್ಲಿ ಮೀನುಗಾರಿಕೆಯನ್ನೇ ಅವಲಂಬಿತಗೊಂಡು ಉದ್ಯೋಗ ಮಾಡಿಕೊಂಡಿದ್ದ ಜನ, ಬರಗಾಲದಿಂದ ಈಗ ನಿರುದ್ಯೋಗಿಗಳಾಗಿದ್ದಾರೆ; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ತೆಗೆದು ಕೊಂಡಿರುವ ಕ್ರಮವೇನು?

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳು)

ಅ) ಗ್ರಾಮೀಣ ಪ್ರದೇಶದಲ್ಲಿ ಮೀನುಗಾರಿಕೆಯನ್ನು ಪ್ರೋತ್ಸಾಹಿಸುವ ಸಲುವಾಗಿ ದೊಡ್ಡ ಕೆರೆಗಳ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ಸಹಕಾರ ಸಂಘದವರಿಗೆ ಹಾಗೂ ವ್ಯಕ್ತಿಗಳಿಗೆ ಗುತ್ತಿಗೆ ನೀಡಿ ಅಥವಾ ಹರಾಜು ಮೂಲಕ ಗುತ್ತಿಗೆ ನೀಡಿ ಮೀನುಮರಿ ಪೂರೈಕೆ ಮಾಡಿ, ಮೀನು ಉತ್ಪಾದಿಸುವ ಮೂಲಕ ಉದ್ಯೋಗ ಅವಕಾಶ ಕಲ್ಪಿಸಲಾಗುತ್ತಿದೆ. ಇದಲ್ಲದೆ ಮೀನು ಕೃಷಿಕರ ಅಭಿವೃದ್ಧಿ ಸಂಸ್ಥೆಗಳು ಗ್ರಾಮೀಣ ಯುವಕರಿಗೆ ಒಳನಾಡು ಮೀನುಗಾರಿಕೆಯಲ್ಲಿ ತರಬೇತಿ ನೀಡಿ ಸಣ್ಣ ಕೆರೆಗಳಲ್ಲಿ ಮೀನು ಸಾಕಾಣಿಕೆ ಮಾಡಲು ಹೂಡುವಳಿ ಪದಾರ್ಥಗಳ ಮೇಲೆ ಸಹಾಯಧನ ನೀಡಿ ಮೀನುಗಾರಿಕೆ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲಾಗುತ್ತಿದೆ, ಹಾಗೂ ಮೀನು ಕೃಷಿ ಆಸಕ್ತರು ಸ್ವಂತ ಜಮೀನಿನಲ್ಲಿ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಹೆಕ್ಟೇರ್‌ಗೆ ರೂ. 40,000.00 ಸಹಾಯಧನ ನೀಡಲಾಗುವುದು, ಜಾಗು/ಚೌಳು ಪ್ರದೇಶದಲ್ಲಿ ಮೀನು ಕೊಳ ನಿರ್ಮಾಣ ಮಾಡಲು ಪ್ರತಿ ಎಕರೆಗೆ ಗರಿಷ್ಠ ರೂ. 30,000.00ಗಳು ಮತ್ತು ಸ್ವಂತ ಜಮೀನಿನಲ್ಲಿ ಮೀನು ಕೊಳ ನಿರ್ಮಾಣ ಮಾಡಿ ಮೀನು ಪಾಲನೆ ತೆಗೆದುಕೊಳ್ಳಲು ಪ್ರತಿ ಎಕರೆಗೆ ಗರಿಷ್ಠ ರೂ. 10,000.00ಗಳ ಸಹಾಯ ಧನವನ್ನು ನೀಡಿ ಮೀನು ಪಾಲನೆಯನ್ನು ಪ್ರೋತ್ಸಾಹಿಸಲಾಗುತ್ತಿದೆ.

ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಆ) ಹೌದು, ಸರ್ಕಾರದ ಗಮನಕ್ಕೆ ಬಂದಿದೆ.

ಇ) ಬೆಳಗಾವಿ ಜಿಲ್ಲೆಯಲ್ಲಿ ಹೆಚ್ಚಿನ ಮೀನುಗಾರರು ನದಿ ಮೀನುಗಾರಿಕೆಯನ್ನು ಅವಲಂಬಿಸಿರುತ್ತಾರೆ. ಬೇಸಿಗೆಯ ದಿನಗಳಲ್ಲಿ ನದಿಯಲ್ಲಿ ನೀರು ಕಡಿಮೆ ಆಗುವುದರಿಂದ ನಿರುದ್ಯೋಗದ ಸಮಸ್ಯೆಯ ತಲೆದೋರುವ ಸಾಧ್ಯತೆ ಇರುತ್ತದೆ. ನಿರುದ್ಯೋಗದ ಸಮಸ್ಯೆಯನ್ನು ನಿವಾರಿಸಲು ಕೆರೆಗಳಲ್ಲಿ ಮೀನು ಸಕಾಣಿಕೆಯನ್ನು ಕೈಗೊಳ್ಳಲು ಪ್ರೋತ್ಸಾಹಿಸಲಾಗುತ್ತದೆ. 2004–05ನೇ ಸಾಲಿನಲ್ಲಿ 38 ಗ್ರಾಮೀಣ ನಿರುದ್ಯೋಗಿ ಯುವಕರಿಗೆ ಒಳನಾಡು ಮೀನುಗಾರಿಕೆಯಲ್ಲಿ ತರಬೇತಿ ನೀಡಿ ಅವರ ಊರಿನಲ್ಲಿರುವ ಸಣ್ಣ ಕೆರೆಗಳಲ್ಲಿ ಮೀನು ಸಾಕಾಣಿಕೆ ಮಾಡಿ ಸ್ವಂತ ಉದ್ಯೋಗವನ್ನು ಕೈಗೊಳ್ಳಲು ಅವಕಾಶ ಮಾಡಿ ಕೊಡಲಾಗಿದೆ.

2002–03ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಬರಗಾಲ ಉಂಟಾದ ಕಾರಣ ಸರ್ಕಾರದ ಆದೇಶದಂತೆ ಜಿಲ್ಲೆಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಅವಧಿಯನ್ನು ಒಂದು ವರ್ಷ ವಿಸ್ತರಿಸಿ ಕೊಡಲಾಗಿದೆ. ಅದರಂತೆ ರೂ. 1,34,900.00 ಮೊತ್ತದ ಪರಿಹಾರವನ್ನು ಈ ಜಿಲ್ಲೆಯ ಮೀನುಗಾರರು ಪಡೆದಿರುತ್ತಾರೆ.

2004–05ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ವಿವಿಧ ಕೆರೆಗಳಲ್ಲಿ 22.60 ಲಕ್ಷ ಮೀನು ಮರಿ ಬಿತ್ತನೆ ಮಾಡಿ ಅಭಿವೃದ್ಧಿಪಡಿಸಲಾಗಿದೆ. ಇದರಿಂದ ಮುಂದಿನ ದಿನಗಳಲ್ಲಿ ಮೀನಿನ ಹಿಡುವಳಿ ಮಾಡಲು ಜಿಲ್ಲೆಯ ಮೀನುಗಾರರಿಗೆ ಉದ್ಯೋಗದ ಅವಕಾಶ ಸಿಗುತ್ತದೆ.

ವಿಶೇಷ ಘಟಕ ಯೋಜನೆಯನ್ವಯ 15 ಪರಿಶಿಷ್ಟ ಜಾತಿಯ ಮೀನುಗಾರರಿಗೆ ಮೀನೋಪಕರಣ ನೀಡಲಾಗಿದೆ. ಮೀನು ಮಾರುಕಟ್ಟೆ ಯೋಜನೆಯನ್ವಯ 5 ಫಲಾನುಭವಿಗಳಿಗೆ ಸೈಕಲ್ ಮತ್ತು ಐಸ್ ಬಾಕ್ಸ್ ಖರೀದಿಗೆ ಶೇಕಡ 50 ರಷ್ಟು ಸಹಾಯಧನ ನೀಡಲಾಗಿದೆ. ಜೌಗು ಮತ್ತು ಚೌಳು ಭೂಮಿಯಲ್ಲಿ ಮೀನು ಕೃಷಿ ಕೈಗೊಂಡ 4 ಮೀನು ಕೃಷಿಕರಿಗೆ ತಲಾ ರೂ. 30,000–00ದಂತೆ ಒಟ್ಟು ರೂ. 1,20,000–00ಗಳ ಸಹಾಯಧನವನ್ನು ನೀಡಲಾಗಿದೆ.

2332(2579) ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ (ಕಿತ್ತೂರು):– ಮಾನ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಐತಿಹಾಸಿಕ ಪರಂಪರೆಯುಳ್ಳ ಚನ್ನಮ್ಮನ ಕಿತ್ತೂರಿನಲ್ಲಿ ಮಾಹಿತಿ ತಂತ್ರಜ್ಞಾನ ಕೇಂದ್ರ ಸ್ಥಾಪಿಸಲು ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಯವರು)

ಅ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಕಿತ್ತೂರಿನಲ್ಲಿ ಮಾಹಿತಿ ತಂತ್ರಜ್ಞಾನ ಕೇಂದ್ರ ಸ್ಥಾಪಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.